# ೨೭ರಿಂದ ಮುರುಘವನಕ್ಕೆ ಸಾರ್ವಜನಿಕರ ಪ್ರವೇಶಕ್ಕೆ ಅವಕಾಶ

ಚಿತ್ರದುರ್ಗ, ಜೂ. 26 – ಕೋವಿಡ್-19 2ನೇ ಅಲೆಯ ಹಿನ್ನೆಲೆಯಲ್ಲಿ ಮುಚ್ಚಲಾಗಿದ್ದ ನಗರದ ಮುರುಘಾ ವನವನ್ನು ನಾಳೆಯಿಂದ (27-6-21ರಿಂದ) ಕೋವಿಡ್-19 ನಿಯಮಗಳನ್ವಯ ಸಾರ್ವಜನಿಕ ವೀಕ್ಷಣೆಗೆ ಅನುವು ಮಾಡಿಕೊಡಲಾಗಿದೆ ಎಂದು ಶ್ರೀಮಠದ ಪ್ರಕಟಣೆಯು ತಿಳಿಸಿದೆ. ಮುರುಘಾವನಕ್ಕೆ ಭೇಟಿ ನೀಡುವ ಸಾರ್ವಜನಿಕರು ಮಾಸ್ಕ್ ಧರಿಸುವುದು, ಸ್ಯಾನಿಟೈಸರ್ ಮತ್ತು ವ್ಯಕ್ತಿಗತ ಅಂತರ ಕಾಪಾಡಿಕೊಳ್ಳುವುದನ್ನು ಕಡ್ಡಾಯಗೊಳಿಸಲಾಗಿದೆ.

